Akashvani: Bangalore
Regional Bulletin In Kannada
06.11.2026: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

06.11.2026: 14.30hrs
****

ಮುಖ್ಯಾಂಶಗಳು :

1. ಹದಿನೈದು ದಿನದೊಳಗೆ ಪಿಂಚಣಿ ಸಮಸ್ಯೆ ಬಗೆಹರಿಯಲಿದೆ - ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಭರವಸೆ
2. ಇದೇ ೧೩ರಂದು ಮೆಟ್ರೋ ಗುಲಾಬಿ ಮಾರ್ಗ ಲೋಕಾರ್ಪಣೆ; ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟನೆ
3. ವನ್ಯಜೀವಿ ಸಂಘರ್ಷ ತಡೆಗೆ ಸರ್ಕಾರದಿಂದ ಸೂಕ್ತ ಕ್ರಮ; ಅರಣ್ಯ ಸಚಿವ ರಾಮಲಿಂಗಾ ರೆಡ್ಡಿ
4. ಗೃಹ ಲಕ್ಷ್ಮಿ ಯೋಜನೆಯ ಫಲಾನುಭವಿಗಳೊಂದಿಗೆ ಮುಖ್ಯಮಂತ್ರಿ ಸಂವಾದ
5. ಬಡವರ ಆರೋಗ್ಯದ ಬಗ್ಗೆ ರಾಜ್ಯ ಸರ್ಕಾರಕ್ಕೆ ಕಾಳಜಿ ಇಲ್ಲ; ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪ

****

ರಾಜ್ಯದಲ್ಲಿ ವೃದ್ಧಾಪ್ಯ, ಅಂಗವಿಕಲತೆ ಸೇರಿದಂತೆ ವಿವಿಧ ಸಾಮಾಜಿಕ ಭದ್ರತಾ ಪಿಂಚಣಿಗಳು ಸ್ಥಗಿತಗೊಂಡಿದ್ದು, ಈ ಸಂಬಂಧ ಈಗಾಗಲೇ ಎರಡು-ಮೂರು ಸಭೆಗಳನ್ನು ನಡೆಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ೩೦ ಸಾವಿರ ಇದ್ದ ಆದಾಯ ಮಿತಿಯನ್ನು ಒಂದು ಲಕ್ಷದ ೨೦ ಸಾವಿರಕ್ಕೆ ಹೆಚ್ಚಿಸಲಾಗಿದೆ. ಹೀಗಾಗಿ ಆದಾಯ ಕಾರಣದಿಂದ ಅರ್ಹರಿಗೆ ಸಮಸ್ಯೆಯಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ೬೦ ವರ್ಷ ಮೇಲ್ಪಟ್ಟವರಿಗೆ ನೀಡಬೇಕಾದ ವೃದ್ಧಾಪ್ಯ ಪಿಂಚಣಿಗೆ ೪೦, ೩೦ ಹಾಗೂ ೨೦ ವರ್ಷದವರೂ ಅರ್ಜಿ ಸಲ್ಲಿಸಿರುವ ಪ್ರಕರಣಗಳು ಗಮನಕ್ಕೆ ಬಂದಿದೆ. ಈ ಹಿನ್ನೆಲೆಯಲ್ಲಿ ೨೩ ಲಕ್ಷ ಅರ್ಜಿಗಳನ್ನು ಪರಿಶೀಲಿಸಿ, ಅನರ್ಹ ಅರ್ಜಿಗಳನ್ನು ವಿಲೇವಾರಿ ಮಾಡುವ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ. ಮುಂದಿನ ಒಂದು ವಾರದಿಂದ ೧೫ ದಿನಗಳೊಳಗೆ ಸಮಸ್ಯೆ ಬಗೆಹರಿಯಲಿದೆ ಎಂದು ಭರವಸೆ ನೀಡಿದ್ದಾರೆ.

****

ಮೆಟ್ರೋ ಗುಲಾಬಿ ಮಾರ್ಗವನ್ನು ಇದೇ ೧೩ರಂದು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆಗೊಳಿಸಲಿದ್ದಾರೆ. ಕನಕಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಈ ವಿಷಯವನ್ನು ಖಚಿತಪಡಿಸಿದ್ದಾರೆ. ಪ್ರಧಾನಿ ಬಳಿ ಕೇಂದ್ರ ಸರ್ಕಾರವೇ ಸಕ್ಕರೆ ಬೆಲೆ ನಿಗದಿ ಮಾಡುವ ಬಗ್ಗೆ ಪ್ರಸ್ತಾಪ ಮಾಡಲಾಗುವುದು ಎಂದು ತಿಳಿಸಿದ್ದಾರೆ. ಈಗಾಗಲೇ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಈ ಬಗ್ಗೆ ಪ್ರಯತ್ನ ಮಾಡುತ್ತಿರುವುದಾಗಿ ಹೇಳಿದ್ದಾರೆ. ಇದೇ ವೇಳೆ ಬಿಜೆಪಿ ಪಕ್ಷಕ್ಕೂ ಮೆಟ್ರೋ ಉದ್ಘಾಟನೆಗೂ ಏನು ಸಂಬಂಧ ಎಂದು ಪ್ರಶ್ನಿಸಿದ್ದಾರೆ. ಕೆಲ ನಾಯಕರು ಪ್ರಧಾನಿಯನ್ನು ಆಹ್ವಾನಿಸಿದ್ದು, ತಾವು ಎಂದು ಪ್ರಚಾರ ಗಿಟ್ಟಿಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇಂದು ಪಕ್ಷದ ನಾಯಕರಾದ ರಾಹುಲ್ ಗಾಂಧಿ ಕರೆದಿರುವ ಸಭೆಯಲ್ಲಿ ಭಾಗವಹಿಸಲು ನವದೆಹಲಿಗೆ ತೆರಳುವುದಾಗಿ ತಿಳಿಸಿದ್ದಾರೆ.

****

ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಬೆಳೆ ನಷ್ಟಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರಕ್ಕೆ ಈಗಾಗಲೇ ಮೂರು ಜ್ಞಾಪಕ ಪತ್ರ ಸಲ್ಲಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಅನ್ವಯ ೨೨ ಸಾವಿರ ಕೋಟಿ ರೂಪಾಯಿ ಪರಿಹಾರ ನೀಡುವಂತೆ ಮನವಿ ಮಾಡಲಾಗಿದೆ ಎಂದು ಹೇಳಿದ್ದಾರೆ.

ಧ್ವನಿಪರಮೇಶ್ವರ್

ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಒಟ್ಟು ನಷ್ಟವನ್ನು ೬೨ ಸಾವಿರ ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ಸಮಯಾವಕಾಶ ನೀಡಿದರೆ ಸರ್ವಪಕ್ಷ ನಿಯೋಗದೊಂದಿಗೆ ದೆಹಲಿಗೆ ತೆರಳಿ, ಪ್ರಧಾನಿ, ಗೃಹ ಸಚಿವರು ಮತ್ತು ಕೃಷಿ ಸಚಿವರನ್ನು ಖುದ್ದಾಗಿ ಭೇಟಿ ಮಾಡಿ, ಮನವಿ ಸಲ್ಲಿಸುವ ಉದ್ದೇಶವಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸರ್ಕಾರ ಯಾವುದೇ ವೆಚ್ಚ ಮಾಡಿದರೂ ಅದು ಆರ್ಥಿಕ ಹೊರೆ ಎನಿಸಿಕೊಳ್ಳುತ್ತದೆ. ಹೀಗಾಗಿ ಆದಾಯ ಮತ್ತು ವೆಚ್ಚ ಎರಡನ್ನೂ ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದ್ದಾರೆ. ಈ ಬಾರಿ ಕಳೆದ ವರ್ಷಕ್ಕಿಂತ ಸರ್ಕಾರದ ಆದಾಯ ಉತ್ತಮವಾಗಿದೆ ಎಂದು ಹೇಳಿದ್ದಾರೆ.

****

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರದ ಡಿಎಫ್ಓ ಕಚೇರಿಯಲ್ಲಿ ಇಂದು ಅರಣ್ಯಾಧಿಕಾರಿಗಳ ಜೊತೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಸಭೆ ನಡೆಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ೧೫೫

ಹುಲಿಗಳಿದ್ದು ಸಂರಕ್ಷಿತ ಪ್ರದೇಶ ಸೇರಿ ಬಫರ್ ವಲಯದಲ್ಲಿ ೧೯೦ ಕ್ಕೂ ಅಧಿಕ ಹುಲಿಗಳು ಓಡಾಟ ನಡೆಸುತ್ತಿವೆ ಎಂದು ತಿಳಿಸಿದ್ದಾರೆ.

ಚಾಮರಾಜನಗರದಲ್ಲಿ ಕಳೆದ ೧೧ ವರ್ಷಗಳ ಅವಧಿಯಲ್ಲಿ ಕಾಡುಪ್ರಾಣಿಗಳ ದಾಳಿಯಿಂದ ೩೪ ಮಂದಿ ಸಾವನ್ನಪ್ಪಿದ್ದಾರೆ. ಕಳೆದ ಒಂದು ವರ್ಷದಲ್ಲಿ ಒಟ್ಟು ೩೪ ಹುಲಿಗಳನ್ನು ಸೆರೆ ಹಿಡಿಯಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ರೈಲ್ವೆ ಬ್ಯಾರಿಕೇಡ್ ಅಳವಡಿಸಲು, ಹೆಚ್ಚುವರಿ ಥರ್ಮಲ್ ಡ್ರೋಣ್ ಕ್ಯಾಮರಾ ಮತ್ತು ಸಿಬ್ಬಂದಿ ನೇಮಕಕ್ಕೆ ಅಧಿಕಾರಿಗಳು ಮನವಿ ಮಾಡಿದ್ದು, ಈ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದ್ದಾರೆ. ಕೇರಳ ತ್ಯಾಜ್ಯ ತಡೆಗೆ ಹಾಗೂ ರಾಜ್ಯದ ಅರಣ್ಯಗಳಲ್ಲಿ ಹಬ್ಬಿರುವ ಲಂಟಾನ ತೆರವಿನ ಬಗ್ಗೆಯೂ ಕ್ರಮ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

****

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳೊಂದಿಗೆ ಗೃಹ ಕಚೇರಿ ಕೃಷ್ಣಾದಲ್ಲಿ ಸಂವಾದ ನಡೆಸಿದರು. ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ರೇವಣ್ಣ, ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪದ್ಮಾವತಿ, ಮುಖ್ಯಮಂತ್ರಿ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ತಾವು ತಯಾರಿಸುವ ಉತ್ಪನ್ನಗಳನ್ನು ಮುಖ್ಯಮಂತ್ರಿಗಳಿಗೆ ಉಡುಗೊರೆಯಾಗಿ ನೀಡಿದರು.

****

ರಾಜ್ಯವನ್ನು ಸರ್ಕಾರ ಆರ್ಥಿಕ ದಿವಾಳಿಯತ್ತ ತಳ್ಳುತ್ತಿದ್ದು, ಬಡವರ ಆರೋಗ್ಯವನ್ನು ನಿರ್ಲಕ್ಷಿಸುತ್ತಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಆರೋಗ್ಯ ಸಚಿವ ಯು.ಟಿ. ಖಾದರ್ ಅವರ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಕನಿಷ್ಠ ರಕ್ತ ಪರೀಕ್ಷೆಗಳನ್ನು ನಡೆಸಲು ಹಣವಿಲ್ಲದಂತಹ ಪರಿಸ್ಥಿತಿಯನ್ನು ರಾಜ್ಯ ಸರ್ಕಾರ ತಂದಿದೆಯೇ ಎಂದು ಪ್ರಶ್ನಿಸಿದ್ದಾರೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಕೆಮ್ಮಿನ ಮಾತ್ರೆಗಳು ಮತ್ತು ಪ್ಯಾರಾಸಿಟಮಲ್‌ನಂತಹ ಮೂಲಭೂತ ಔಷಧಿಗಳ ಕೊರತೆ ಇದೆ ಎಂದು ತಿಳಿಸಿದ್ದಾರೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಡಿಯಲ್ಲಿ ೪೫ ಸಂಶೋಧನಾ ವಿದ್ಯಾರ್ಥಿಗಳಿಗೆ ಕಳೆದ ೧೧ ತಿಂಗಳಿನಿಂದ ಶಿಷ್ಯವೇತನ ಬಿಡುಗಡೆಯಾಗಿಲ್ಲ ಎಂದು ದೂರಿದ್ದಾರೆ.

****

ಕನ್ನಡದ ಖ್ಯಾತ ಚಿಂತಕ, ಭಾಷಾವಿಜ್ಞಾನಿ ಮತ್ತು ಹಿರಿಯ ಸಾಹಿತ್ಯ ವಿಮರ್ಶಕ ಪ್ರೊ. ಕೆ.ವಿ. ನಾರಾಯಣ ಇಂದು ನಿಧನ ಹೊಂದಿದ್ದಾರೆ. ಬೆಂಗಳೂರಿನ ಯಲಹಂಕದಲ್ಲಿ ನೆಲೆಸಿದ್ದ ಅವರಿಗೆ ನಿನ್ನೆ ತಡರಾತ್ರಿ ಆರೋಗ್ಯದಲ್ಲಿ ತೀವ್ರ ಏರುಪೇರು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಆಸ್ಪತ್ರೆಗೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕಿನ ಕಂಪಲಾಪುರದಲ್ಲಿ ೧೯೪೪ರಲ್ಲಿ ಜನಿಸಿದ ಕೆ.ವಿ. ನಾರಾಯಣ ಅವರು, ಬೆಂಗಳೂರು ವಿಶ್ವವಿದ್ಯಾಲಯದಿಂದ ಕನ್ನಡದಲ್ಲಿ ಎಂ.ಎ. ಸ್ನಾತಕೋತ್ತರ ಪದವಿ ಪಡೆದಿದ್ದರು. ಬಳಿಕ ಖ್ಯಾತ ಸಾಹಿತಿ ರಾಷ್ಟ್ರಕವಿ ಡಾ. ಜಿ.ಎಸ್. ಶಿವರುದ್ರಪ್ಪ ಅವರ ಮಾರ್ಗದರ್ಶನದಲ್ಲಿ ಪಿಎಚ್.ಡಿ ಸಂಶೋಧನೆ ಪೂರ್ಣಗೊಳಿಸಿದರು. ಹಂಪಿಯ ಕನ್ನಡ ವಿಶ್ವವಿದ್ಯಾಲಯದಲ್ಲಿ ಭಾಷಾ ನಿಕಾಯದ ಡೀನ್, ಕುಲಸಚಿವ ಹಾಗೂ ಪ್ರಭಾರ ಕುಲಪತಿಯಂತಹ ಉನ್ನತ ಹುದ್ದೆಗಳನ್ನು ಯಶಸ್ವಿಯಾಗಿ ನಿಭಾಯಿಸಿದ್ದರು. ಅವರ ನಿಧನಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ಸಚಿವ ಎಂ.ಬಿ. ಪಾಟೀಲ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

****

ಬೆಂಗಳೂರಿನ ರಾಜಕಾಲುವೆಗಳಲ್ಲಿನ ಹೂಳು ತೆರವುಗೊಳಿಸಲು ಸೂಪರ್ ಸಕ್ಷನ್ ರೊಬೊಟಿಕ್ ಯಂತ್ರವನ್ನು ಬಳಸುವ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ರೊಬೊಟಿಕ್ ಯಂತ್ರದ ಮೂಲಕ ರಾಜಕಾಲುವೆ ಸ್ವಚ್ಛಗೊಳಿಸುವ ಪ್ರಾಯೋಗಿಕ ಕಾರ್ಯವನ್ನು ವೀಕ್ಷಿಸಿದ ಅವರು, ಯಂತ್ರ ಸಮರ್ಪಕವಾಗಿ ಕಾರ್ಯನಿರ್ವಹಿಸಿದರೆ ನಗರದಲ್ಲಿ ರಾಜಕಾಲುವೆಗಳ ಸ್ವಚ್ಛತೆಗೆ ಬಳಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಆರ್ಯನ್ ಸಂಸ್ಥೆಯ ಈ ಯಂತ್ರವು ಮುಚ್ಚಿದ ರಾಜಕಾಲುವೆಗಳ ಒಳಭಾಗದಲ್ಲಿ ಸುಮಾರು ೩೦ ಮೀಟರ್ ದೂರದವರೆಗೆ ಸ್ವಚ್ಛಗೊಳಿಸುವ ಸಾಮರ್ಥ್ಯ ಹೊಂದಿದೆ. ವೈರ್‌ಲೆಸ್ ರಿಮೋಟ್ ಮೂಲಕ ಕಾರ್ಯನಿರ್ವಹಿಸುವ ಯಂತ್ರವು ಹೂಳು ಮತ್ತು ಕೆಸರನ್ನು ವ್ಯಾಕ್ಯೂಮ್ ಪೈಪ್ ಮೂಲಕ ಹೀರಿಕೊಂಡು ಸಂಗ್ರಹಿಸುತ್ತಿದೆ.

****

ಯಾದಗಿರಿ ಜಿಲ್ಲೆಯ ಹುಣಸಗಿ ತಾಲ್ಲೂಕಿನ ನಾರಾಯಣಪುರ ಬಳಿಯ ಬಸವಸಾಗರ ಜಲಾಶಯದಿಂದ ಎಡ ಮತ್ತು ಬಲದಂಡೆ ಕಾಲುವೆಗಳಿಗೆ ಇದೇ ೩೦ರವರೆಗೆ ನಿರಂತರವಾಗಿ ನೀರು ಹರಿಸುವಂತೆ ಆಗ್ರಹಿಸಿ ಇಂದು ವಿವಿಧ ರೈತ ಹಾಗೂ ಪ್ರಗತಿಪರ ಸಂಘಟನೆಗಳು ಕರೆ ನೀಡಿದ್ದ ಯಾದಗಿರಿ ಬಂದ್ ಗೆ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಮಾಜಿ ಸಚಿವ ನರಸಿಂಹ ನಾಯಕ ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಒಕ್ಕೂಟದಿಂದ ಬಂದ್ ಹಾಗೂ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಬಂದ್‌ಗೆ ಬೆಂಬಲ ಸೂಚಿಸಿ ನಗರದ ವ್ಯಾಪಾರಸ್ಥರು ಅಂಗಡಿ, ಮುಂಗಟ್ಟುಗಳನ್ನು ಸ್ವಯಂಪ್ರೇರಿತವಾಗಿ ಮುಚ್ಚಿದ್ದರು. ಇದರಿಂದ ಪ್ರಮುಖ ವಾಣಿಜ್ಯ ಪ್ರದೇಶಗಳಲ್ಲಿ ವ್ಯಾಪಾರ ವಹಿವಾಟು ಸ್ಥಗಿತಗೊಂಡಿತ್ತು. ಶಾಲಾ-ಕಾಲೇಜುಗಳು, ಸರ್ಕಾರಿ ಕಚೇರಿಗಳು ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಸಂಚಾರ ಎಂದಿನಂತೆ ಮುಂದುವರಿದಿತ್ತು.

****

ಸಂಕ್ಷಿಪ್ತ ಸುದ್ದಿ

೧. ದೇಶದ್ಯಾಂತ ಹಮ್ಮಿಕೊಂಡಿರುವ ಲೈಫ್ ಸರ್ಟಿಫಿಕೇಟ್ ಅಭಿಯಾನ ಹಿನ್ನೆಲೆಯಲ್ಲಿ ಇಂದು ಮೈಸೂರಿನ ರೈಲ್ವೆ ಸಮುದಾಯ ಭವನದಲ್ಲಿ ರೈಲ್ವೆ ಇಲಾಖೆಯು ಇಲಾಖೆಯಲ್ಲಿ ನಿವೃತ್ತಿ ಹೊಂದಿರುವವರಿಗೆ ಅಗತ್ಯ ವಿರುವ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ವಿತರಿಸಿತು.

೨. ಚಿತ್ರದುರ್ಗ ಚಳ್ಳಕೆರೆ ನಗರಸಭೆ ವ್ಯಾಪ್ತಿಯಲ್ಲಿ ಆಧುನಿಕ ಮೂಲಸೌಕರ್ಯ ಒಳಗೊಂಡ ನೂತನ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ.

೩. ಚಿಕ್ಕಬಳ್ಳಾಪುರ ಜಿಲ್ಲೆ ಮಂಚೇನಹಳ್ಳಿ ತಾಲ್ಲೂಕು ಕೇಂದ್ರದ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ನಾಳೆ ಜಿಲ್ಲಾಧಿಕಾರಿ ಜಿ.ಪ್ರಭು ಅಧ್ಯಕ್ಷತೆಯಲ್ಲಿ ಪ್ರಜಾಸೇವಾ ಆಂದೋಲನ ನಡೆಯಲಿದೆ. ಆಸಕ್ತ ಸಾರ್ವಜನಿಕರು ಈ ಪ್ರಜಾಸೇವಾ ಆಂದೋಲನದಲ್ಲಿ ಭಾಗವಹಿಸಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬಹುದೆಂದು ಜಿಲ್ಲಾಡಳಿತದ ಪ್ರಕಟಣೆಯ ಮೂಲಕ ತಿಳಿಸಿದೆ.

೪. ಚಿಕ್ಕಬಳ್ಳಾಪುರ ನಗರ ಹೊರವಲಯದ ಚದುಲಪುರ ಬಳಿ ಇರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ಜಿಲ್ಲೆಯ ನಿರುದ್ಯೋಗಿ ಯುವಕ ಯುವತಿಯರಿಗಾಗಿ ಅಣಬೆ ಬೇಸಾಯ, ಕುರಿ ಸಾಕಾಣಿಕೆ ಮತ್ತು ಜೂಟ್ ಬ್ಯಾಗ್ ತಯಾರಿಕೆಯ ಉಚಿತ ತರಬೇತಿಯನ್ನು ಇದೇ ತಿಂಗಳ ಎರಡನೇ ವಾರದಲ್ಲಿ ಹಮ್ಮಿಕೊಂಡಿದೆ.

*****END******